(173)
(15)
(ಗ್ರ)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಬಲ್ಕೀಸ್ ಬಾನು ಇವರು ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ**

ರಾಜ್ಯಾದ್ಯಂತ ಹಲವಾರು ವರ್ಷಗಳಿಂದ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಗ್ರೂಪ್ ಸಿ ಮತ್ತು ಡಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರನ್ನು ಖಾಯಂಗೊಳಿಸದೆ ಹೊರಗುತ್ತಿಗೆ ಮೂಲಕ ಭರ್ತಿ ಮಾಡುತ್ತಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

**<u>ಉತ್ತರ</u>**

ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/551/ಯುಪಿಸಿ/99, ದಿನಾಂಕ:07.08.2003 ರಲ್ಲಿ ಸರ್ಕಾರವು ಹೊರಡಿಸಿರುವ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) ನಿಯಮಗಳು - 2003 ರ ನಿಯಮ 8(2) ರ ಪ್ರಕಾರ ಇಲಾಖಾ ವ್ಯಾಪ್ತಿಯಲ್ಲಿ ಬರುವ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:01.03.2001 ರಂದು ಹಾಗೂ ತದನಂತರ ತೆರವಾಗುವ ಎಲ್ಲಾ ಬೋಧಕೇತರ ಹುದ್ದೆಗಳು ಶಾಶ್ವತ ಅನುದಾನರಹಿತ ಹುದ್ದೆಗಳೆಂದು ಪರಿಗಣಿಸಲ್ಪಡುತ್ತದೆ. (Vacant and unapproved posts of non-teaching staff as on 01.03.2001 shall be permanently unaided. Any vacancies in the non-teaching posts which, arisen after 01.03.2001 on account of retirement, resignation, removal, dismissal and death etc, are to be remain permanently unaided. Such vacancies which are unaided shall be filled by the management and salary and other allowences shall be paid from it own resources) ಎಂದಿರುತ್ತದೆ.

ಆದಾಗ್ಯೂ, ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಗುರುತಿಸಿರುವ ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ. ಪ್ರಸ್ತುತ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ/02/ಬಿಇಎಂ/2024, ದಿನಾಂಕ:07.06.2024 ರನ್ವಯ ಗ್ರೂಪ್-ಡಿ ಮತ್ತು ಗ್ರೂಪ್-ಸಿ ಹುದ್ದೆಗಳ ಭರ್ತಿ (ಬೆರಳಚ್ಚುಗಾರರು / ದತ್ತಾಂಶ ನಮೂದು ಸಹಾಯಕರು, ವಾಹನ ಚಾಲಕರು, ಶೀಘ್ರಲಿಪಿಗಾರರು) ವೃಂದದ ಹುದ್ದೆಗಳ ಎದುರಾಗಿ ನೇರ ನೇಮಕಾತಿಯ ಪ್ರಶ್ನೆ ಉದ್ಭವಿಸುವುದಿಲ್ಲ. ಈ ವೃಂದಗಳಲ್ಲಿ (ಬ್ಯಾಕ್ ಲಾಗ್ ಖಾಲಿ ಹುದ್ದೆ ಸೇರಿದಂತೆ) ಯಾವುದೇ ಖಾಲಿ ಹುದ್ದೆಯನ್ನು ಹೊರಗುತ್ತಿಗೆ ಮೂಲಕವೇ ಭರ್ತಿ ಮಾಡುವುದು ರಾಜ್ಯ ಸರ್ಕಾರದ ನೀತಿಯಾಗಿದೆ ಎಂದು ಆದೇಶಿಸಲಾಗಿದೆ.

ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಆಡಳಿತ ಮಂಡಳಿಯೇ ನೇಮಕಾತಿ ಪ್ರಾಧಿಕಾರವಾಗಿರುವುದರಿಂದ, ಅವರ ಹಂತದಲ್ಲಿ ಅಗತ್ಯತೆಗನುಸಾರವಾಗಿ ಬೋಧಕೇತರ ಹುದ್ದೆಗಳನ್ನು ಸ್ವಂತ ಸಂಪನ್ಮೂಲಗಳಿಂದ ಭರ್ತಿ ಮಾಡಬಹುದಾಗಿರುತ್ತದೆ.

ಇಡಿ 69 ಯುಪಿಸಿ 2026 (ಇ)

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು